**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003**

ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ಏಪ್ರಿಲ್-2019/21/2018-19 ದಿನಾಂಕ: 31.10.2018

ಗೆ,

ರಾಜ್ಯದ ಎಲ್ಲಾ ಉಪ ನಿರ್ದೇಶಕರು (ಆಡಳಿತ)
ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ

ಮಾನ್ಯರೆ

ವಿಷಯ:- ಮಾರ್ಚ್/ಏಪ್ರಿಲ್-2019ರ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ಅರ್ಹ ಶಾಲಾ ವಿದ್ಯಾರ್ಥಿಗಳ, ಖಾಸಗಿ ಅಭ್ಯರ್ಥಿಗಳ ಮತ್ತು ಪುನರಾವರ್ತಿತ ಅಭ್ಯರ್ಥಿಗಳ ವಿವರಗಳನ್ನು ಆನ್‌ಲೈನ್ (SATS) ಮೂಲಕ ಅಪ್‌ಲೋಡ್ ಮಾಡಲು ಮತ್ತು ಖಾಸಗಿ ಅಭ್ಯರ್ಥಿಗಳ ನೊಂದಣಿಯನ್ನು ವಿಸ್ತರಿಸಿರುವ ಅಂತಿಮ ದಿನಾಂಕದೊಳಗೆ ಪೂರ್ಣಗೊಳಿಸುವ ಬಗ್ಗೆ.

ಉಲ್ಲೇಖ:- 1) ಮಂಡಳಿ ಅಧಿಸೂಚನೆ ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ಏಪ್ರಿಲ್-2019/21/2018-19 ದಿ:20.09.18.
2) ಈ ಕಛೇರಿ ಸಮ ಸಂಖ್ಯೆ ಪತ್ರದ ದಿನಾಂಕ:15.10.2018 & 30.10.2018

*******

ಮಾರ್ಚ್/ಏಪ್ರಿಲ್-2019ರ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ಅರ್ಹ ಶಾಲಾ ವಿದ್ಯಾರ್ಥಿಗಳ (CCERF), ಖಾಸಗಿ ಅಭ್ಯರ್ಥಿಗಳ (CCEPF) ಮತ್ತು ಪುನರಾವರ್ತಿತ ಅಭ್ಯರ್ಥಿಗಳ (CCERR, CCEPR, NSR ಮತ್ತು NSPR) ವಿವರಗಳನ್ನು ಆನ್‌ಲೈನ್ (SATS) ಮೂಲಕ ಅಪ್‌ಲೋಡ್ ಮಾಡಲು ಮತ್ತು ಖಾಸಗಿ ಅಭ್ಯರ್ಥಿಗಳ ನೋಂದಣಿ ಮಾಡಲು ಹಾಗೂ ಶಾಲಾ ಸಂಕೇತ ಪಡೆಯುವ ದಿನಾಂಕಗಳನ್ನು ಈ ಕೆಳಕಂಡಂತೆ ವಿಸ್ತರಣೆ ಮಾಡಲಾಗಿದೆ. ವಿಸ್ತರಿಸಿದ ಅಂತಿಮ ದಿನಾಂಕದ ನಂತರ SATS ಜಾಲತಾಣವನ್ನ FREEZE ಮಾಡಲಾಗುವುದರಿಂದ, ವಿದ್ಯಾರ್ಥಿಗಳ ವಿವರಗಳನ್ನು ಅಪ್‌ಲೋಡ್ ಮಾಡಲು ಸಾಧ್ಯವಾಗುವುದಿಲ್ಲ.

ಆದ್ದರಿಂದ ಅಂತಿಮ ದಿನಾಂಕದೊಳಗೆ ಎಲ್ಲಾ ಅರ್ಹ ವಿದ್ಯಾರ್ಥಿಗಳ ವಿವರಗಳನ್ನು SATS ಮೂಲಕ ಅಪ್‌ಲೋಡ್ ಮಾಡುವಂತೆ ರಾಜ್ಯದ ಎಲ್ಲಾ ಉಪ ನಿರ್ದೇಶಕರು (ಆಡಳಿತ) / ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ಜಿಲ್ಲಾ ವ್ಯಾಪ್ತಿಗೆ ಬರುವ ಶಾಲೆಗಳ ಮುಖ್ಯೋಪಾದ್ಯಾಯರಿಗೆ ತಿಳಿಸುವುದು. ಹಾಗೂ ಜಿಲ್ಲೆ/ತಾಲ್ಲೂಕು ವ್ಯಾಪ್ತಿಯ ಸ್ಥಳೀಯ ದಿನಪತ್ರಿಕೆ ಹಾಗೂ ಇತರೆ ಮಾಧ್ಯಮಗಳ ಮೂಲಕ ಸದರಿ ವಿಷಯದ ಬಗ್ಗೆ ಶಾಲಾ ಮುಖ್ಯೋಪಾಧ್ಯಾಯರು/ಪೋಷಕರು/ವಿದ್ಯಾರ್ಥಿಗಳ ಗಮನಕ್ಕೆ ಬರುವಂತೆ ವ್ಯಾಪಕ ಪ್ರಚಾರವಾಗುವಂತೆ ಅಗತ್ಯ ಕ್ರಮ ಕೈಗೊಳ್ಳುವುದು.

ವಿದ್ಯಾರ್ಥಿಗಳ ವಿವರಗಳನ್ನು ವಿಸ್ತರಿಸಿದ ಅಂತಿಮ ದಿನಾಂಕದೊಳಗೆ ಆನ್‌ಲೈನ್ SATS ಮೂಲಕ ಅಪ್‌ಲೋಡ್ ಮಾಡಿದ ನಂತರ ಪರೀಕ್ಷಾ ಶುಲ್ಕದ ಚಲನ್ ಈ ಕೆಳಗೆ ನಿಗದಿಪಡಿಸಿರುವ ದಿನಾಂಕದೊಳಗೆ ಮುದ್ರಿಸಿಕೊಂಡು ನೆಫ್ಟ್ ಮೂಲಕ ಬ್ಯಾಂಕ್‌ಗೆ ಜಮೆ ಮಾಡಲು ಮತ್ತು ದಾಖಲೆಗಳನ್ನು ಮಂಡಳಿಗೆ ಸಲ್ಲಿಸಲು ತಿಳಿಸಿದೆ.

ಕೆಳಕಂಡಂತೆ ಕ್ರಮ ಸಂಖ್ಯೆ 1 ರಿಂದ 3ರವರೆಗೆ ಉಲ್ಲೇಖಿತ-2ರ ಪತ್ರದ ದಿನಾಂಕ:30.10.2018ರಲ್ಲಿ ದಿನಾಂಕಗಳನ್ನು ವಿಸ್ತರಣೆ ಮಾಡಲಾಗಿತ್ತು. ಹಾಗೂ ಈಗ ಕ್ರಮ ಸಂಖ್ಯೆ 04 ಮತ್ತು 05ರ ದಿನಾಂಕಗಳನ್ನು ಕೆಳಕಂಡಂತೆ ವಿಸ್ತರಿಸಲಾಗಿದೆ.

| ಕ್ರ ಸಂ | ವಿವರ | ಈ ಹಿಂದೆ ನಿಗದಿಪಡಿಸಿದ್ದ ದಿನಾಂಕ | ವಿಸ್ತರಣೆ ಮಾಡಿದ ಕೊನೆಯ ದಿನಾಂಕ |
|---|---|---|---|
| 1 | ಶಾಲಾ ಸಂಕೇತ ಪಡೆಯಲು ನಿಗದಿಪಡಿಸಿದ ಕೊನೆಯ ದಿನಾಂಕ: | 29.10.2018 | 09.11.2018 |
| 2 | 2019ರ ಮಾರ್ಚ್/ಏಪ್ರಿಲ್ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳನ್ನು ಜಿಲ್ಲಾ ಉಪನಿರ್ದೇಶಕರ ಕಛೇರಿಯಲ್ಲಿ ನೋಂದಣಿ ಮಾಡಿಕೊಳ್ಳಲು ನಿಗದಿಪಡಿಸಿದ ಕೊನೆಯ ದಿನಾಂಕ: | 29.10.2018 | 14.11.2018 |
| 3 | SATS ಮೂಲಕ CCERF, CCEPF, CCERR, CCEPR, NSR ಮತ್ತು NSPR ವಿದ್ಯಾರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕ: | 31.10.2018 | 15.11.2018 |
| 4 | SATS ಮೂಲಕ CCERF, CCEPF, CCERR , CCEPR, NSR ಮತ್ತು NSPR ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ಚಲನ್ ಮುದ್ರಿಸಿಕೊಂಡು ನೆಫ್ಟ್ ಮೂಲಕ ಬ್ಯಾಂಕ್‌ಗೆ ಜಮೆ ಮಾಡಲು ನಿಗದಿಪಡಿಸಿದ ದಿನಾಂಕ | 01.11.2018 ರಿಂದ 16.11.2018 | 16.11.2018 ರಿಂದ 30.11.2018 |
| 5 | 2002 ಮತ್ತು ಹಿಂದಿನ ವರ್ಷಗಳ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಪುನರಾವರ್ತಿತ ಅಭ್ಯರ್ಥಿಗಳ (NSR & NSPR) ಎಂಎಸ್‌ಎ, ನಾಮಿನಲ್‌ರೋಲ್ ಮತ್ತು ಸಂಬಂಧಿಸಿದ ದಾಖಲೆಗಳನ್ನು ಮಂಡಳಿಗೆ ಸಲ್ಲಿಸಲು ಕೊನೆಯ ದಿನಾಂಕ | 20.11.2018 | 30.11.2018 |

ತಮ್ಮ ನಂಬುಗೆಯ,

(ವಿ. ಸುಮಂಗಲ) 31/10
ನಿರ್ದೇಶಕರು, ಪರೀಕ್ಷೆಗಳು